RNU AIR DHARWAD

# APRIL 16, 2024

## ALL INDIA RADIO- DHARWAD

## PRADESH SAMACHARA (KANNADA) 7:05 AM

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ; ಶೇಕಡ 34 ರಷ್ಟು ಹಿರಿಯರು ಹಾಗೂ ವಿಶೇಷ ಚೇತನರಿಂದ, ಈಗಾಗಲೇ ಮನೆಯಿಂದ ಮತ ಚಲಾವಣೆ.**
- **ರಾಜ್ಯದಲ್ಲಿ 2ನೇ ಹಂತದ ಲೋಕಸಭೆ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಿಂದ, ನಾಮಪತ್ರ ಸಲ್ಲಿಕೆ.**
- **ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದುವರೆದ ಮತದಾನ ಜಾಗೃತಿ ಜಾಥಾ.**
- **'ಮಿಷನ್ ಗಗನಯಾನ' ಯಶಸ್ಸಿಗೆ, ಇಸ್ರೋದಿಂದ ಹಲವು ವಿಶೇಷ ತಂತ್ರಜ್ಞಾನಗಳ ಅಭಿವೃದ್ಧಿ.**

<><><>

**ಈಗ ವಾರ್ತೆಗಳ ವಿವರ**

<><><>

**ರಾಜ್ಯಾದಂತ ಕಳೆದ ದಿನಾಂಕ 13 ರಿಂದ ಆರಂಭವಾಗಿರುವ, 85 ವರ್ಷ ಮೇಲ್ಪಟ್ಟ ಹಿರಿಯ ಮತದಾರರು ಹಾಗೂ ವಿಶೇಷಚೇತನ ಮತದಾರರಿಗೆ, ಮನೆಯಿಂದಲೇ ಮತ ಚಲಾಯಿಸಲು ಅನುವು ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ರಾಜ್ಯಾದ್ಯಂತ ಒಟ್ಟು 36 ಸಾವಿರದ 689 ಹಿರಿಯ ನಾಗರಿಕರು ಮನೆಯಿಂದ ಮತದಾನ ಮಾಡಲು ನೋಂದಾಯಿಸಿಕೊಂಡಿದ್ದಾರೆ. ಆ ಪೈಕಿ 12 ಸಾವಿರದ 515 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ ಎಂದು, ರಾಜ್ಯ ಚುನಾವಣಾ ಆಯೋಗ ತಿಳಿಸಿದೆ.**

<><><>

**11 ಸಾವಿರದ 920 ವಿಶೇಷಚೇತನ ಮತದಾರರು ಮನೆಯಿಂದ ಮತ ಚಲಾಯಿಸಲು ಹೆಸರು ನೋಂದಾಯಿಸಿಕೊಂಡಿದ್ದಾರೆ. ಆ ಪೈಕಿ ಈ ವರೆಗೆ 4 ಸಾವಿರದ 139 ದಿವ್ಯಾಂಗರು ತಮ್ಮ ಹಕ್ಕು ಚಲಾಯಿಸಿದ್ದಾರೆ ಎಂದು ಆಯೋಗ ಮಾಹಿತಿ ನೀಡಿದೆ.**

<><><>

ರಾಜ್ಯದಲ್ಲಿ ಚುನಾವಣಾ ಅಕ್ರಮ ಹಾಗೂ ಚುನಾವಣಾ ವೆಚ್ಚದ ಮೇಲ್ವಿಚಾರಣೆ ನಡೆಸಲು ತೀವ್ರ ನಿಗಾವಹಿಸಲಾಗಿದೆ. ಕ್ಷಿಪ್ರ ಪಡೆಗಳು, ಸ್ಥಿರ ಕಣ್ಗಾವಲು ತಂಡಗಳು ಮತ್ತು ಪೊಲೀಸ ಅಧಿಕಾರಿಗಳು ಇದು ವರೆಗೆ ನಾನಾ ಪ್ರಕರಣಗಳಿಗೆ ಸಂಬಂಧಿಸಿದಂತೆ, ಸಾವಿರದ 707 ಎಫ್.ಐ.ಆರ್ ಗಳನ್ನು ದಾಖಲಿಸಿದ್ದಾರೆ ಎಂದು ಆಯೋಗ ಮಾಹಿತಿ ನೀಡಿದೆ.

<><><>

ರಾಜ್ಯದ ಮೊದಲ ಹಂತದ, ಲೋಕಸಭೆ ಚುನಾವಣೆ, ಇದೇ 26ರಂದು ನಡೆಯಲಿದೆ. ದಕ್ಷಿಣಕನ್ನಡ ಲೋಕಸಭಾ ಕ್ಷೇತ್ರದ ಚುನಾವಣಾ ರಾಯಬಾರಿ, ಖ್ಯಾತ ವೈದ್ಯ, ಸಮಾಜ ಸೇವಕ ಮಂಗಳೂರಿನ ಡಾಕ್ಟರ್ ಬಿ.ದೇವದಾಸ್ ರೈ, ಆಕಾಶವಾಣಿ ಮೂಲಕ ಮನವಿ ಮಾಡಿದ್ದು, ಮತದಾರರು ತಮ್ಮ ಹಕ್ಕು ಮತ್ತು ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಲು ಕೋರಿದ್ದಾರೆ.

<><><>

ಡಾಕ್ಟರ್ ಬಿ. ದೇವದಾಸ್ ರೈ 45 ಸೆಕೆಂದುಗಳು

<><><>

ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲೂಕು ತೆಳ್ಳನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ, ಸುಂಡ್ರಹಳ್ಳಿ ಗ್ರಾಮದಲ್ಲಿ, 110 ವರ್ಷದ ಶತಾಯುಷಿ ರಂಗಮ್ಮ ಅವರು, ಕಡ್ಡಾಯ ಮತದಾನ ಮಾಡುವಂತೆ, ಜಾಗೃತಿ ಮೂಡಿಸಿದ್ದು, ವಿಶೇಷ.

<><><>

ಕೊಪ್ಪಳದ ಕೊಟಗೇರಾ ಕಾಲೋನಿಯ, ಹಕ್ಕಿ–ಪಿಕ್ಕಿ ಸಮುದಾಯದವರಿಗೆ, ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

<><><>

ಚುನಾವಣಾ ಆಯೋಗ, ಬೆಂಗಳೂರಿನ ಬಿ.ಬಿ.ಎಂ.ಪಿ. ಸಹಯೋಗದಲ್ಲಿ, ಆಯೋಜಿಸಿದ್ದ 'ನಮ್ಮ ನಡೆ ಮತಗಟ್ಟೆಯ ಕಡೆ' ಜಾಗೃತಿ ಅಭಿಯಾನದಲ್ಲಿ ವಿವಿಧ ಕಾಲೇಜುಗಳ 2 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡರು.

ಚುನಾವಣಾ ರಾಯಬಾರಿ ನಟ ರಮೇಶ್ ಅರವಿಂದ್ ಮಾತನಾಡಿ, ಮತದಾನದ ಮೂಲಕ ಉತ್ತಮ ಪ್ರಜಾಪ್ರಭುತ್ವ ಕಟ್ಟಬೇಕಿದೆ ಎಂದರು.

<><><>

ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಗೆ, ನಾಮಪತ್ರ ಸಲ್ಲಿಕೆಯ ಎರಡನೇ ದಿನ, ವಿವಿಧ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು, ರಾಜ್ಯಾದ್ಯಂತ ತಮ್ಮ ನಾಮಪತ್ರ ಸಲ್ಲಿಸಿದ್ದಾರೆ.

ಯಾದಗಿರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ರಾಜಾ ಅಮರೇಶ್ವರ ನಾಯಕ ಹಾಗೂ ವಿಜಯಪುರ ಲೋಕಸಭೆ ಪರಿಶಿಷ್ಟ ಜಾತಿ ಮೀಸಲು ಮತಕ್ಷೇತ್ರದ ಜೆ.ಡಿ.ಎಸ್. ಅಭ್ಯರ್ಥಿ ವೆಂಕಟೇಶ್ವರ ಸ್ವಾಮೀಜಿ ಹಾಗೂ ಕಾಂಗ್ರೆಸ್‌ನಿಂದ ರಾಜು ಆಲಗೂರು ಸೇರಿದಂತೆ, ಒಟ್ಟು 3 ನಾಮಪತ್ರಗಳು ಸಲ್ಲಿಕೆಯಾಗಿವೆ.

ಉತ್ತರಕನ್ನಡ ಜಿಲ್ಲೆಯಲ್ಲಿ, ಪಕ್ಷೇತರ ಅಭ್ಯರ್ಥಿಗಳಾದ ಚಿದಾನಂದ ಹರಿಜನ, ಕೃಷ್ಣಾಜಿ ಪಾಟೀಲ್ ಹಾಗೂ ನಿರಂಜನ್ ಉದಯಸಿನ್ಹಾ ಸರದೇಸಾಯಿ ಸೇರಿದಂತೆ 7 ಜನ ನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ಬಾಗಲಕೋಟೆ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ್ ಸೇರಿದಂತೆ ಒಟ್ಟು 3 ಹಾಗೂ ಕೊಪ್ಪಳದಲ್ಲಿ 3 ನಾಮಪತ್ರ ಸಲ್ಲಿಕೆಯಾಗಿವೆ.

ಹಾವೇರಿ ಗದಗ ಲೋಕಸಭಾ ಕ್ಷೇತ್ರದಿಂದ, ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ನಾಮಪತ್ರ ಸಲ್ಲಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ಪ್ರಲ್ಹಾದ ಜೋಶಿ ಸೇರಿದಂತೆ, ಐವರು ಅಭ್ಯರ್ಥಿಗಳು 11 ನಾಮಪತ್ರ ಸಲ್ಲಿಸಿದ್ದಾರೆ ಎಂದು ಧಾರವಾಡ ಜಿಲ್ಲೆ ಚುನಾವಣಾಧಿಕಾರಿ ದಿವ್ಯಾ ಪ್ರಭು ತಿಳಿಸಿದ್ದಾರೆ.

ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಹಾಗೂ ದಾವಣಗೆರೆ ಲೋಕಸಭಾ ಮತಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್, ಬಿಜೆಪಿ ಅಭ್ಯರ್ಥಿ ಜಿ.ಎಸ್.ಗಾಯಿತ್ರಿ ಸೇರಿದಂತೆ, 9 ನಾಮಪತ್ರಗಳು ಸಲ್ಲಿಕೆಯಾಗಿವೆ.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾ ಸಾಹೇಬ್ ಜೊಲ್ಲೆ, ಚುನಾವಣಾಧಿಕಾರಿಗೆ ಚಿಕ್ಕೋಡಿಯಲ್ಲಿ ನಾಮಪತ್ರ ಸಲ್ಲಿಸಿದರು.

ಶಿವಮೊಗ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ ಉಮೇದುವಾರಿಕೆ ಸಲ್ಲಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

18ನೇ ಸಾರ್ವತ್ರಿಕ ಲೋಕಸಭಾ ಚುನಾವಣೆಯನ್ನು, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ಜರುಗಿಸುವ ಉದ್ದೇಶದಿಂದ, ಭಾರತ ಚುನಾವಣಾ ಆಯೋಗ, ಮಾದರಿ ನೀತಿ ಸಂಹಿತೆ ಹಾಗೂ ಸಿಟಿಜನ್ ವಿಜಿಲ್ ಅಪ್ಲಿಕೇಷನ್ ಜಾರಿಗೆ ತಂದಿದೆ. ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಶಿವಮೊಗ್ಗ ಜಿಲ್ಲೆ ಸಾಗರದ ಸಹಾಯಕ ಆಯುಕ್ತ ಯತೀಶ್.

<><><>

ಸಹಾಯಕ ಆಯುಕ್ತ ಯತೀಶ್ 45 ಸೆಕೆಂದುಗಳು

<><><>

18ನೇ ಲೋಕಸಭೆಯ ಮೊದಲ ಹಂತದ ಚುನಾವಣೆಗೂ ಮುನ್ನ, ಚುನಾವಣಾ ಆಯೋಗ ದೇಶಾದ್ಯಂತ, 4 ಸಾವಿರದ 650 ಕೋಟಿ ರೂಪಾಯಿ ಮೊತ್ತದ ನಗದು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಂಡಿದೆ. ಇದು ದೇಶದ 75 ವರ್ಷಗಳ ಚುನಾವಣಾ ಇತಿಹಾಸದಲ್ಲೇ ಅತ್ಯಂತ ಹೆಚ್ಚಿನದಾಗಿದೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ಕರ್ನಾಟಕದಲ್ಲಿ ಏಪ್ರಿಲ್ 13ರ ವರೆಗೆ 35 ಕೋಟಿ 53 ಲಕ್ಷದ 80 ಸಾವಿರದ 70 ರೂಪಾಯಿ ನಗದು, 18 ಕೋಟಿ 75 ಲಕ್ಷಕ್ಕೂ ಹೆಚ್ಚು ಮೌಲ್ಯದ ಮಾದಕ ವಸ್ತು, 60 ಕೋಟಿ 86 ಲಕ್ಷ ಮೌಲ್ಯದ ಉಚಿತ ಕೊಡುಗೆಗಳು ಸೇರಿದಂತೆ, ಒಟ್ಟಾರೆ, 281 ಕೋಟಿ 43 ಲಕ್ಷ ರೂಪಾಯಿ ಮೌಲ್ಯದ ನಗದು ಹಾಗೂ ಮತ್ತಿತರ ವಸ್ತುಗಳನ್ನು ಆಯೋಗದ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

<><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ–ಇಸ್ರೋ, ಮಹತ್ವಾಕಾಂಕ್ಷಿ ಯೋಜನೆ, ಗಗನ ಯಾನ ಮಿಷನ್, ಮೂರು ದಿನಗಳ ಕಾರ್ಯಾಚರಣೆಯಲ್ಲಿ, ಮೂವರು ಸಿಬ್ಬಂದಿಯನ್ನು, 400 ಕಿಲೋ ಮೀಟರ್ ದೂರದ, ಎತ್ತರದ ಕಕ್ಷೆಗೆ ಕಳುಹಿಸಿ, ಮಾನವ ಬಾಹ್ಯಾಕಾಶ ಹಾರಾಟದ ಸಾಮರ್ಥ್ಯವನ್ನು ಪ್ರದರ್ಶಿಸಿ, ಅವರನ್ನು ಸುರಕ್ಷಿತವಾಗಿ ಭೂಮಿಗೆ ಕರೆ ತರಲಾಗುತ್ತದೆ. ಯಶಸ್ವಿ ಕಾರ್ಯಾಚರಣೆ ಬಳಿಕ, ಮಾನವನನ್ನು ಬಾಹ್ಯಾಕಾಶಕ್ಕೆ ಕಳುಹಿಸಿದ ನಾಲ್ಕನೇ ದೇಶ, ಭಾರತ ವಾಗಲಿದೆ. ಈ ಯೋಜನೆಗಾಗಿ, ಇಸ್ರೋ ಹಲವು ನಿರ್ಣಾಯಕ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಿದೆ ಎಂದು, ಇಸ್ರೋದ ನಿವೃತ್ತ ವಿಜ್ಞಾನಿ ಹಾಗೂ ಬೆಂಗಳೂರಿನ ನೆಹರೂ ತಾರಾಲಯದ ನಿರ್ದೇಶಕ ಡಾಕ್ಟರ್ ಬಿ.ಆರ್. ಗುರುಪ್ರಸಾದ್ ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ನಿಧನ ವಾರ್ತೆ:

<><><>

ಸಿರಿಪಾಡ್ದನದ ಮೂಲಕ ಖ್ಯಾತರಾಗಿದ್ದ ಕಲಾವಿದೆ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತೆ, ದಕ್ಷಿಣ ಕನ್ನಡ ಜಿಲ್ಲೆಯ, ಗಿಡಿಗೆರೆ ರಾಮಕ್ಕ ಅವರು, ಕಟೀಲು ಗಿಡಿಗೆರೆಯಲ್ಲಿ ನಿಧನರಾದರು. ಅವರಿಗೆ 102 ವರ್ಷ ವಯಸ್ಸಾಗಿತ್ತು. ಎ.ವಿ.ನಾವಡ ಅವರ ಸಂಪಾದಕತ್ವದಲ್ಲಿ 'ರಾಮಕ್ಕ ಮುಗ್ಗೇರ್ತಿ ಕಟ್ಟಿದ ಸಿರಿಪಾಡ್ದನ' ಎಂಬ ಗ್ರಂಥರೂಪದಲ್ಲಿ, ಹಂಪಿ ಕನ್ನಡ ವಿಶ್ವವಿದ್ಯಾಲಯ, ಅವರ ಪಾಡ್ದನ ಪ್ರಕಟಿಸಿದೆ. ಗಿಡಿಗೆರೆ ರಾಮಕ್ಕ ಅವರು ಅರ್ಧ ಶತಮಾನಕ್ಕೂ ಹೆಚ್ಚು ಕಾಲ ಪಾಡ್ದನ ಕಟ್ಟುವ, ಅದನ್ನು ನಾಟಿ ಗದ್ದೆಗಳಲ್ಲಿ ಹಾಡುವ ಕೆಲಸದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. ಮೃತರ ನಿಧನಕ್ಕೆ ನಾಡಿನ ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><>

ಬೆಳಗಾವಿಯ ಖ್ಯಾತ ವೈದ್ಯ, ಡಾಕ್ಟರ್ ಘನಶ್ಯಾಮ ವೈದ್ಯ, ಕರ್ನಾಟಕ ಆರೋಗ್ಯಧಾಮ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 65 ವರ್ಷ ವಯಸ್ಸಾಗಿತ್ತು. 1984 ರಲ್ಲಿ ಶಸ್ತ್ರ ಚಿಕಿತ್ಸೆಯಲ್ಲಿ ಬಂಗಾರದ ಪದಕದೊಂದಿಗೆ ಪದವಿ ಪಡೆದ, ಡಾಕ್ಟರ್ ಘನಶ್ಯಾಮ, ಆರೋಗ್ಯ ಧಾಮದಲ್ಲಿ ಸೇವೆ ಸಲ್ಲಿಸಿದರು. ಸಂಜೆ ಬೆಳಗಾವಿಯಲ್ಲಿ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಿತು. ಬಹುಶ್ರುತ ವೈದ್ಯರ ನಿಧನಕ್ಕೆ ಗಣ್ಯರು ಕಂಬನಿ ಮಿಡಿದಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಗದಗ ಜಿಲ್ಲೆಯಲ್ಲಿ ಕಾಲರಾ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆ, ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ, ಆರೋಗ್ಯ ಇಲಾಖೆ ಕೋರಿದೆ.

<><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗಾಗಿ, ಆರೋಗ್ಯ ತಪಾಸಣಾ ಶಿಬಿರವನ್ನು ಬೆಳ್ತಂಗಡಿ ತಾಲೂಕಿನ ವಿವಿಧೆಡೆ ನಾಳೆಯಿಂದ ಆಯೋಜಿಸಲಾಗಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ; ಶೇಕಡ 34 ರಷ್ಟು ಹಿರಿಯರು ಹಾಗೂ ವಿಶೇಷ ಚೇತನರಿಂದ, ಈಗಾಗಲೇ ಮನೆಯಿಂದ ಮತ ಚಲಾವಣೆ.
- ರಾಜ್ಯದಲ್ಲಿ 2ನೇ ಹಂತದ ಲೋಕಸಭೆ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಿಂದ, ನಾಮಪತ್ರ ಸಲ್ಲಿಕೆ.
- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದುವರೆದ ಮತದಾನ ಜಾಗೃತಿ ಜಾಥಾ.
- 'ಮಿಷನ್ ಗಗನಯಾನ' ಯಶಸ್ವಿಗೆ, ಇಸ್ರೋದಿಂದ ಹಲವು ವಿಶೇಷ ತಂತ್ರಜ್ಞಾನಗಳ ಅಭಿವೃದ್ಧಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>